ಕರ್ನಾಟಕ ವಿಧಾನಸಭೆ

ಹದಿಮೂರನೇ ವಿಧಾನಸಭೆ

(ಹನ್ನೆರಡನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 1ನೇ ಫೆಬ್ರವರಿ, 2012

(ಸಮಯ: ಬೆಳಿಗ್ಗೆ 11.00 ಗಂಟೆಗೆ)

---

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಎರಡನೇ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಎರಡನೇ ಪಟ್ಟಿ

2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

1. ಕಾರ್ಯದರ್ಶಿಯವರು ವಿಧಾನಪರಿಷತ್ತಿನಿಂದ ಪುನರ್ ಅಂಗೀಕೃತವಾದ ರೂಪದಲ್ಲಿರುವ ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ಎರಡನೇ ತಿದ್ದುಪಡಿ)ವಿಧೇಯಕ, 2011ನ್ನು ಸಭೆಯ ಮುಂದಿಡುವುದು.
2. ಸದಸ್ಯರಿಗೆ ಈಗಾಗಲೇ ಪ್ರತ್ಯೇಕವಾಗಿ ಕಳುಹಿಸಲಾಗಿರುವ ಮೊದಲನೇ ಹಾಗೂ ಎರಡನೇ ಪಟ್ಟಿಯ ರೀತ್ಯಾ.

3. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಶ್ರೀಕಾಂತ್ ಕುಲಕರ್ಣಿ ಅವರು ಪದೇ ಪದೇ ಬರ ಎದುರಿಸುತ್ತಿರುವ ಬಿಜಾಪುರ ಹಾಗೂ ಬಾಗಲಕೋಟೆ ಜಿಲ್ಲೆಗಳಲ್ಲಿ ಈ ಬಾರಿ ಕೃಷ್ಣಾ ನದಿಯ ನೀರು ಬಹಳ ಕಡಿಮೆಯಾಗಿದ್ದು, ಪೂರ್ವಯೋಜಿತವಾಗಿ ಮಹಾರಾಷ್ಟ್ರದ ಕೊಯನಾ ಅಥವಾ ವಾರಣಾ ಜಲಾಶಯದಿಂದ ಕನಿಷ್ಠ 5 ಟಿ.ಎಂ.ಸಿ ನೀರನ್ನು ಬಿಡಿಸಲು ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

2. ಶ್ರೀ ಮಾಲೀಕಯ್ಯ ವೆಂಕಯ್ಯ ಗುತ್ತೇದಾರ್ ಅವರು ಗುಲಬರ್ಗಾ ತಾಲ್ಲೂಕಿನ ಫರ್ತಾಬಾದ್ ವಲಯದ ವ್ಯಾಪ್ತಿಯಲ್ಲಿ ಬರುವ ಕಿರಣಗಿಗೆ 8 ಕಿ.ಮೀ. ದೂರದ ಭೀಮಾ ನದಿಯಿಂದ ಕುಡಿಯುವ ನೀರನ್ನು ಒದಗಿಸಲಾಗುತ್ತಿದ್ದು, ವಿದ್ಯುತ್ತಿನ ಪೂರೈಕೆಯು ಸಮರ್ಪಕವಾಗಿ ಇಲ್ಲದಿರುವುದರಿಂದ ಗ್ರಾಮಕ್ಕೆ 24 ಗಂಟೆಗಳ ಕಾಲ ನಿರಂತರ ವಿದ್ಯುತ್ ಪೂರೈಸಿ ಕುಡಿಯುವ ನೀರನ್ನು ಒದಗಿಸುವ ಬಗ್ಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ

4. ಶಾಸನ ರಚನೆ

I. ವಿಧೇಯಕವನ್ನು ಮಂಡಿಸುವುದು

1) ಕರ್ನಾಟಕ ಪೌರಸಭೆಗಳು ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ)ವಿಧೇಯಕ, 2011
ಶ್ರೀ ಎಸ್.ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲಮಂಡಳಿ ಸಚಿವರು) ಅವರು:–

ಅ) 2011ನೇ ಸಾಲಿನ ಕರ್ನಾಟಕ ಪೌರಸಭೆಗಳು ಮತ್ತು ಇತರ ಕೆಲವು ಕಾನೂನು(ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

II. ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1) ಕರ್ನಾಟಕ ಜಾನಪದ ವಿಶ್ವವಿದ್ಯಾಲಯ ವಿಧೇಯಕ, 2011
ಡಾ:ವಿ.ಎಸ್. ಆಚಾರ್ಯ, (ಉನ್ನತ ಶಿಕ್ಷಣ, ಯೋಜನೆ ಮತ್ತು ಸಾಂಖ್ಯಿಕ, ಮುಜರಾಯಿ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು) ಅವರು:–

ಅ) ಕರ್ನಾಟಕ ವಿಧಾನಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2011ನೇ ಸಾಲಿನ ಕರ್ನಾಟಕ ಜಾನಪದ ವಿಶ್ವವಿದ್ಯಾಲಯ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2) ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ಎರಡನೇ ತಿದ್ದುಪಡಿ)ವಿಧೇಯಕ, 2011
ಡಾ:ವಿ.ಎಸ್. ಆಚಾರ್ಯ, (ಉನ್ನತ ಶಿಕ್ಷಣ, ಯೋಜನೆ ಮತ್ತು ಸಾಂಖ್ಯಿಕ, ಮುಜರಾಯಿ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು) ಅವರು:–

ಅ) ಕರ್ನಾಟಕ ವಿಧಾನಪರಿಷತ್ತಿನಿಂದ ಪುನರ್ ಅಂಗೀಕೃತವಾದ ರೂಪದಲ್ಲಿರುವ 2011ನೇ ಸಾಲಿನ ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪುನರ್ ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಪು.ತಿ.ನೋ

5. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2012ರ ಜನವರಿ 30ರಂದು ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನಸಭೆಯ ಸದಸ್ಯರಾದ ನಾವು ಘನತೆವೆತ್ತ ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ"ಎಂದು ಶ್ರೀ ಡಿ.ಎನ್. ಜೀವರಾಜ್ ಅವರು ಸೂಚಿಸುವುದು.

ಶ್ರೀ ನೆಹರು ಓಲೇಕಾರ ಅವರು ಅನುಮೋದಿಸುವುದು.

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(www.kar.nic.in/kla)